ಸಾಕ್ಷಿಗೆ ಪ್ರಮಾಣ ವಚನವನ್ನು ದಿಃ10–10–2025 ರಂದು ಬೋಧಿಸಲಾಯಿತು.

ಮುಖ್ಯ ವಿಚಾರಣೆಃ ವಾದಿ ಪರ ಶ್ರೀ ಎಂ ಆರ್ ಪಿ ವಕೀಲರಿಂದಃ

ನಾನು ಈ ದಾವೆಯಲ್ಲಿ ವಾದಿ ನಂ1 ಎ ಆಗಿದ್ದು, ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿದ್ದು ಸದರಿ ಪ್ರಮಾಣ ಪತ್ರದಲ್ಲಿರುವ ಎಲ್ಲಾ ಸಂಗತಿಗಳು ನನಗೆ ಗೊತ್ತಿದ್ದು ಅದರಲ್ಲಿರುವ ಸಹಿ ನನ್ನದೇ ಆಗಿರುತ್ತದೆ. ಮತ್ತು ಪ್ರಮಾಣಪತ್ರದಲ್ಲಿರುವ ವಿಷಯಗಳು ನಾನೇ ಹೇಳಿ ಬರೆಸಿರುತ್ತೇನೆ. ಈ ಪ್ರಮಾಣ ಪತ್ರವನ್ನು ಮುಖ್ಯ ವಿಚಾರಣೆಯ ಭಾಗವಾಗಿ ಪರಿಗಣಿಸಲು ಹಾಜರುಪಡಿಸಿರುತ್ತೇನೆ.

ದಾವಾಸ್ತಿಗೆ ಸಂಬಂದಿಸಿದಂತೆ ಕೊಂಡ್ಲಿ ಗ್ರಾಮ ಸರ್ವೆ ನಂ 501/1ಬ ಕ್ಕೆ ಸಂಬಂದಿಸಿದಂತೆ 2015–2016 ನೇ ಸಾಲಿನ ಪಹಣಿ ಪತ್ರಿಕೆಯನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ–1 ಎಂದು, ದಿಃ 09–10–2018 ರಂದು ಪ್ರತಿವಾದಿಗೆ ನೀಡಿದ ನೋಟೀಸ ನ ಕಚೇರಿ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ–2 ಎಂದು, ಅಂಚೇ ರಶೀಧಿಯನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ–3 ಎಂದು, ಸದರಿ ನಿ.ಪಿ–2 ನೋಟೀಸ ಪ್ರತಿವಾದಿಗೆ ಜಾರಿಯಾದ ಬಗ್ಗೆ ಅಂಚೆ ಕಚೇರಿಯವರು ನೀಡಿರುವ track consignment ಹಾಜರುಪಡಿಸಿದ್ದು ಅದನ್ನು ನಿ.ಪಿ–4 ಎಂದು ಗುರುತಿಸಲಾಯಿತು.

ಈ ಹಂತದಲ್ಲಿ ವಾದಿ ಪರ ವಕೀಲರು ಮುಂದುವರೆದ ಮುಖ್ಯ ವಿಚಾರಣೆಗೆ ಸಮಯವನ್ನು ಕೋರಿದ್ದರಿಂದ ಕಾಲಾವಕಾಶ ನೀಡಿ ಮುಂದೂಡಲಾಯಿತು.

(ನನ್ನ ಹೇಳಿಕೆ ಪ್ರಕಾರ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.)

**ಓ.ಹೇ.ಕೇ. ಸರಿ ಇದೆ,**

**ಸಹಿ ಇದೆ**

**ಸಿವಿಲ್ ನ್ಯಾಯಾಧೀಶರು ಸಿದ್ದಾಪುರ**